## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 138 (12) |
| ಸದಸ್ಯರ ಹೆಸರು | : | ಡಾ. ಬಿ.ಜಿ.ಪಾಟೀಲ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 17.08.2026 |
| ಉತ್ತರಿಸುವ ಸಚಿವರು | : | ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಹಜ್ ಮತ್ತು ವಕ್ಫ್ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಲಬುರಗಿ ಮತ್ತು ಯಾದಗಿರಿ ಜಿಲ್ಲೆಗಳಲ್ಲಿರುವ ಮೊರಾರ್ಜಿ ದೇಸಾಯಿ, ಅಲ್ಪಸಂಖ್ಯಾತ ವಸತಿ ಶಾಲೆಗಳ ಸಂಖ್ಯೆ ಎಷ್ಟು; | ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆಯಡಿ ಕಲಬುರಗಿ ಜಿಲ್ಲೆಯಲ್ಲಿ 17 ಹಾಗೂ ಯಾದಗಿರಿ ಜಿಲ್ಲೆಯಲ್ಲಿ 04 ಅಲ್ಪಸಂಖ್ಯಾತರ ವಿವಿಧ ವಸತಿ ಶಾಲೆಗಳು ಪ್ರಸ್ತುತ ಕಾರ್ಯನಿರ್ವಹಿಸುತ್ತಿವೆ. |
| ಆ) | ಚಿತ್ತಾಪುರ ತಾಲ್ಲೂಕಿನಲ್ಲಿ ಬರುವ ದಂಡೋತಿ ಗ್ರಾಮದಲ್ಲಿರುವ ಮೊರಾರ್ಜಿ ದೇಸಾಯಿ ಅಲ್ಪಸಂಖ್ಯಾತರ ಶಾಲೆಯಲ್ಲಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು ಹಾಗೂ ಪ್ರತಿಯೊಬ್ಬ ವಿದ್ಯಾರ್ಥಿಗೆ ಮಾಸಿಕ ಎಷ್ಟು ಹಣ ವ್ಯಯ ಮಾಡಲಾಗುತ್ತಿದೆ; | ಚಿತ್ತಾಪುರ ತಾಲ್ಲೂಕಿನ ದಂಡೋತಿ ಗ್ರಾಮದಲ್ಲಿರುವ ಅಲ್ಪಸಂಖ್ಯಾತರ ಮೊರಾರ್ಜಿ ದೇಸಾಯಿ ವಸತಿ ಶಾಲೆಯಲ್ಲಿರುವ ಒಟ್ಟು ವಿದ್ಯಾರ್ಥಿಗಳ ಸಂಖ್ಯೆ: 213.<br><br>ಹಾಗೂ ಸದರಿ ಅಲ್ಪಸಂಖ್ಯಾತರ ವಸತಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ಪ್ರತಿಯೊಬ್ಬ ವಿದ್ಯಾರ್ಥಿಗೆ ತಗಲುವ ವೆಚ್ಚ ಹಾಗೂ ಹಣ ವ್ಯಯದ ವಿವರಗಳು ಈ ಕೆಳಕಂಡಂತಿದೆ:- |

| ಕ್ರ. ಸಂ | ವಿವರ | ವೆಚ್ಚಗಳು (ರೂ.ಗಳಲ್ಲಿ) |
|---|---|---|
| 1 | ಆಹಾರ ವೆಚ್ಚ | ಮಾಹೆಯಾನ ರೂ.1850/- |
| 2 | ಶುಚಿಕಿಟ್ | ಮಾಹೆಯಾನ ಬಾಲಕರಿಗೆ ರೂ.171/- & ಬಾಲಕಿಯರಿಗೆ ರೂ.193/ |
| 3 | ಗಂಡು ಮಕ್ಕಳಿಗೆ ಕ್ಷೌರ ವೆಚ್ಚ | ವಾರ್ಷಿಕ ರೂ.300/- |
| 4 | ಸಮವಸ್ತ್ರ ವೆಚ್ಚ (ಸಿದ್ಧಪಡಿಸಿದ ಎರಡು ಜೊತೆ) | ವಾರ್ಷಿಕ ರೂ.1400/ |
| 5 | ಶೂ & ಸಾಕ್ಸ್ ವೆಚ್ಚ (ಎರಡು ಜೊತೆ) | ವಾರ್ಷಿಕ ರೂ.752/- |
| 6 | ಪಠ್ಯಪುಸ್ತಕ | ವಾರ್ಷಿಕ ರೂ.450/- |
| 7 | ನೋಟ್‌ಪುಸ್ತಕ ಮತ್ತು ಲೇಖನಾ ಸಾಮಗ್ರಿ | ವಾರ್ಷಿಕ ರೂ.1650/ |

| | | |
|---|---|---|
| ಇ) | ಸದರಿ ವಸತಿ ಶಾಲೆಯಲ್ಲಿ ಕಳಪೆ ಆಹಾರ ಹಾಗೂ ಕಲುಷಿತ ನೀರು ಸೇವನೆಯಿಂದ ಅಸ್ವಸ್ಥಗೊಂಡ ಮಕ್ಕಳ ಸಂಖ್ಯೆ ಎಷ್ಟು ಹಾಗೂ ಪ್ರಸ್ತುತ ಮಕ್ಕಳ ಆರೋಗ್ಯದ ಸ್ಥಿತಿ ಹೇಗಿದೆ; ಮತ್ತು ಸದರಿ ಪ್ರಕರಣ ಮರುಕಳಿಸದಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು; | ಸದರಿ ವಸತಿ ಶಾಲೆಯಲ್ಲಿ ದಿನಾಂಕ: 09.07.2026 ರಂದು ಅಸ್ವಸ್ಥಗೊಂಡ ಒಟ್ಟು 39 ಮಕ್ಕಳು ಆಸ್ಪತ್ರೆಗೆ ದಾಖಲಾಗಿದ್ದು, ಹಾಗೂ ದಿನಾಂಕ: 10.07.2026 ರಂದು ಮಕ್ಕಳ ಆರೋಗ್ಯದ ಸ್ಥಿತಿ ಸಂಪೂರ್ಣ ಗುಣಮುಖವಾಗಿ ಉತ್ತಮ ಆರೋಗ್ಯದೊಂದಿಗೆ ಶಾಲೆಗೆ ಹಿಂದಿರುಗಿರುತ್ತಾರೆ.<br><br>ಮುಂದುವರೆದು, ವಿದ್ಯಾರ್ಥಿಗಳ ಆರೋಗ್ಯ, ಸುರಕ್ಷತೆ, ಆಹಾರದ ಗುಣಮಟ್ಟ, ಸ್ವಚ್ಛತೆ ಹಾಗೂ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಮಾಡಲಾಗಿರುತ್ತದೆ. ಹಾಗೂ ಇಂತಹ ಘಟನೆಗಳು ಮರುಕಳಿಸದಂತೆ ಕರ್ತವ್ಯ ನಿರ್ವಹಿಸುವಂತೆ ಅಧಿಕಾರಿ/ ಸಿಬ್ಬಂದಿಗಳಿಗೆ ನಿರ್ದೇಶನ ನೀಡಲಾಗಿದೆ. ಕರ್ತವ್ಯಲೋಪ ಅಥವಾ ನಿರ್ಲಕ್ಷ್ಯ ಕಂಡುಬಂದಲ್ಲಿ ಸಂಬಂಧಿಸಿದ ಸಿಬ್ಬಂದಿಯವರ ವಿರುದ್ಧ ನಿಯಮಾನುಸಾರ ಕಠಿಣ ಶಿಸ್ತು ಕ್ರಮ ಜರುಗಿಸಲಾಗುವುದು. |
| ಈ) | ವಸತಿ ಶಾಲೆಗಳಿಗೆ ಆಹಾರ ಸಾಮಾಗ್ರಿಗಳನ್ನು ಪೂರೈಸುತ್ತಿರುವ ಗುತ್ತಿಗೆದಾರ ಹಾಗೂ ಅಧಿಕಾರಿಗಳು ಶಾಮೀಲಾಗಿ ಕಳಪೆ ಅಕ್ಕಿ, ಗೋಧಿ, ಬೇಳೆ, ಹಿಟ್ಟು ಹಾಗೂ ಇನ್ನಿತರ ಸೇರಿದಂತೆ ಅನೇಕ ವಸ್ತುಗಳನ್ನು ಸರಬರಾಜು ಮಾಡುತ್ತಿದ್ದು, ಸಂಬಂಧಪಟ್ಟವರ ವಿರುದ್ಧ ಸರ್ಕಾರ ಇದುವರೆವಿಗೂ ಕೈಗೊಂಡಿರುವ ಕ್ರಮಗಳೇನು? | ಕೇಂದ್ರ ಸರಕಾರದಿಂದ Welfare Hostel scheme ಯೋಜನೆಯಡಿ ಮಂಜೂರಾದ ಅಕ್ಕಿ ಮತ್ತು ಗೋಧಿಯನ್ನು ಪ್ರಮಾಣದ ಹಂಚಿಕೆಗೆ ಅನುಗುಣವಾಗಿ ಆಹಾರ ನಾಗರಿಕ ಸರಬರಾಜು ಇಲಾಖೆ ರವರಿಂದ ಗುತ್ತಿಗೆದಾರರು ಎತ್ತುವಳಿ ಮಾಡಿ ವಸತಿ ಶಾಲೆಗಳಿಗೆ ಸರಬರಾಜು ಮಾಡುತ್ತಾರೆ.<br><br>ಮುಂದುವರೆದು, ಅಕ್ಕಿ ಮತ್ತು ಗೋಧಿ ಹೊರತುಪಡಿಸಿ ಇತರೆ ಆಹಾರ ಸಾಮಾಗ್ರಿಗಳು ಗುತ್ತಿಗೆದಾರರು ವಸತಿ ಶಾಲೆಗಳಿಗೆ ಸರಬರಾಜು ಮಾಡುತ್ತಿದ್ದು, ಅವುಗಳನ್ನು ಸಂಬಂಧಪಟ್ಟ ಅಧಿಕಾರಿಗಳು ಮತ್ತು ಸಿಬ್ಬಂದಿಗಳು ನಿಯಮಾನುಸಾರ ಗುಣಮಟ್ಟ ಪರಿಶೀಲಿಸಿ, ಸರಬರಾಜು ಪಡೆಯುತ್ತಾರೆ. ಉಳಿದಂತೆ ಬಾಳೆಹಣ್ಣು, ತರಕಾರಿ, ಮೊಟ್ಟೆ, ಹಾಲು ಪ್ರತಿದಿನ ಅಗತ್ಯತೆಗೆ ಅನುಗುಣವಾಗಿ ಸರಬರಾಜು ಮಾಡುತ್ತಾರೆ. |

**ಸಂಖ್ಯೆ: MWD-LMQ/116/2026**

**(ಯು.ಟಿ.ಖಾದರ್ ಫರೀದ್)**
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ಅಲ್ಪಸಂಖ್ಯಾತರ ಕಲ್ಯಾಣ, ಹಜ್
ಮತ್ತು ವಕ್ಫ್ ಸಚಿವರು